ಪ್ರ-72 (157)

**ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಮಾನ್ಯ ಶ್ರೀ ಮರಿತಿಬ್ಬೇಗೌಡ ರವರು ನಿಯಮ- 72ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರಿಸುವ ಬಗ್ಗೆ.**

## ವಿಷಯ

ರಾಜ್ಯದಲ್ಲಿ ಕಳೆದ 5 ವರ್ಷಗಳಿಂದ ಪ್ರಾಥಮಿಕ, ಪ್ರೌಢಶಾಲೆಗಳ ಹಾಗೂ ಪದವಿ ಪೂರ್ವ ಕಾಲೇಜುಗಳ ಶಿಕ್ಷಕರು ಮತ್ತು ಉಪನ್ಯಾಸಕರುಗಳ ವರ್ಗಾವಣೆಯನ್ನು ಪೂರ್ಣ ಪ್ರಮಾಣದಲ್ಲಿ ನಡೆಸದೆ ಇರುವುದರಿಂದ ಸಂಬಂಧಿಸಿದ ಶಿಕ್ಷಕರು ಮತ್ತು ಉಪನ್ಯಾಸಕರುಗಳಿಗೆ ತೊಂದರೆ ಉಂಟಾಗಿ ಕೌಟುಂಬಿಕವಾಗಿ ತೀವ್ರ ತೊಂದರೆ ಅನುಭವಿಸುತ್ತಿದ್ದು, ಗುಣಮಟ್ಟದ ಶಿಕ್ಷಣವನ್ನು ನೀಡಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಪ್ರಸ್ತುತ ಸಾಲಿನಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಪದವಿ ಪೂರ್ವ ಶಿಕ್ಷಣ ಇಲಾಖೆಯು ಪೂರ್ಣ ಪ್ರಮಾಣದಲ್ಲಿ ನಡೆಸಬೇಕೆಂಬ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

## ಉತ್ತರ

**ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ವರ್ಗಾವಣೆ** ಕಳೆದ 2016-17, 2018-19 ರಲ್ಲಿ ಸಮರ್ಪಕವಾಗಿ ನಡೆದಿರುತ್ತದೆ. ಶಿಕ್ಷಕ ವೃಂದದಿಂದ ಮೇಲಿಂದ ಮೇಲೆ ನ್ಯಾಯಾಲಯಗಳಲ್ಲಿ ಪ್ರಕರಣಗಳು ದಾಖಲಾಗುತ್ತಿರುವ ಹಿನ್ನೆಲೆಯಲ್ಲಿ ಹಾಗೂ ಬಹಳಷ್ಟು ಅಹವಾಲುಗಳು ಸಲ್ಲಿಕೆಯಾಗಿದ್ದ ಕಾರಣ ವರ್ಗಾವಣೆ ಪ್ರಕ್ರಿಯೆಯನ್ನು ಸರಳೀಕರಿಸಿ ಕಳೆದ ಸಾಲಿಗಿಂತ ಭಿನ್ನವಾಗಿ ಶಿಕ್ಷಕ ಸ್ನೇಹಿ ವರ್ಗಾವಣೆಯನ್ನು ನಡೆಸಲು 2020 ರಲ್ಲಿ ಹೊಸದಾಗಿ ಶಿಕ್ಷಕರ ವರ್ಗಾವಣಾ ಕಾಯ್ದೆ ಮತ್ತು ನಿಯಮಗಳನ್ನು ರೂಪಿಸಲಾಗಿದ್ದು ಅದರಂತೆ ವರ್ಗಾವಣಾ ಮಾರ್ಗಸೂಚಿಯನ್ನು ಪ್ರಕಟಿಸಲಾಗಿತ್ತು.

ವರ್ಗಾವಣಾ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಲು ಎಲ್ಲಾ ವಿಧವಾದ ಸಿದ್ಧತೆಗಳನ್ನು ಮಾಡಿಕೊಂಡಿರುವ ಸಂದರ್ಭದಲ್ಲಿ ಶ್ರೀ ಮಹೇಶ್ವರಪ್ಪ ಮತ್ತು ಇತರರು ಪ್ರಸ್ತುತ 2020 ರಲ್ಲಿ ನಡೆಯಬೇಕಾಗಿದ್ದ ವರ್ಗಾವಣಾ ಪ್ರಕ್ರಿಯೆಗೆ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿ ಅರ್ಜಿ ಸಂಖ್ಯೆ:6559-6566/2020, ದಿನಾಂಕ:28-12-2020ರಲ್ಲಿ ತಡೆಯಾಜ್ಞೆ ತಂದಿರುತ್ತಾರೆ. ಮಾನ್ಯ ನ್ಯಾಯಾಲಯದ ಆದೇಶದಂತೆ ಕಾನೂನಾತ್ಮಕ ಸಮಸ್ಯೆ ಉಂಟಾಗಿರುವುದರಿಂದ ಪ್ರಸ್ತುತ ವರ್ಗಾವಣಾ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಮಾನ್ಯ ಕರ್ನಾಟಕ ರಾಜ್ಯ ಆಡಳಿತ ನ್ಯಾಯ ಮಂಡಳಿಯು ನೀಡಿರುವ ತೀರ್ಪಿನ ವಿರುದ್ಧ ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ:2348/2021 ಸಲ್ಲಿಸಲಾಗಿದೆ. ಪ್ರಸ್ತುತ ಪ್ರಕರಣ ಆಲಿಕೆಗಾಗಿ ನಿಗಧಿಗೊಳಿಸಲಾಗಿರುತ್ತದೆ. ಮಾನ್ಯ ರಾಜ್ಯ ಉಚ್ಚ ನ್ಯಾಯಾಲಯದ ಅಂತಿಮ ತೀರ್ಪುಬಂದ ನಂತರ ತೀರ್ಪಿನನ್ವಯ ವರ್ಗಾವಣೆ ಪ್ರಕ್ರಿಯೆ ಬಗ್ಗೆ ಮುಂದಿನ ಕ್ರಮ ಕೈಗೊಳ್ಳಲಾಗುವುದು.

**ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ವರ್ಗಾವಣೆಯನ್ನು** ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 12 ಇಟಿಆರ್ 2017 ದಿನಾಂಕ:29-11-2017ರಂತೆ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ, ನಿಯಂತ್ರಣ) ಕಾಯ್ದೆ 2017ರಂತೆ ನಡೆಸಲಾಗುತ್ತಿತ್ತು. ಈ ವರ್ಗಾವಣೆ ಕಾಯ್ದೆಯನ್ವಯ ದಿನಾಂಕ:01-08-2018 ರಿಂದ ದಿನಾಂಕ:04-

08-2018ರ ವರೆಗೆ ಕೋರಿಕೆ ವರ್ಗಾವಣೆ ಹಾಗೂ ಕಡ್ಡಾಯ ವರ್ಗಾವಣೆ ನಡೆಸಲಾಗಿರುತ್ತದೆ. ಕೋರಿಕೆ ವರ್ಗಾವಣೆಯಲ್ಲಿ ಒಟ್ಟು ವಿವಿಧ ವಿಷಯಗಳ 608 ಉಪನ್ಯಾಸಕರುಗಳನ್ನು ಹಾಗೂ ಕಡ್ಡಾಯ ವರ್ಗಾವಣೆಯಲ್ಲಿ 596 ವಿವಿಧ ವಿಷಯಗಳ ಉಪನ್ಯಾಸಕರುಗಳು ಆನ್‌ಲೈನ್ ಮೂಲಕ ಕೌನ್ಸಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡು ವರ್ಗಾವಣೆಗೊಂಡಿರುತ್ತಾರೆ.

2019ರಲ್ಲಿ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರುಗಳ ಶೂನ್ಯ ದಾಖಲಾತಿ ಹಾಗೂ ಕೋರಿಕೆ ವರ್ಗಾವಣೆಯನ್ನು ದಿನಾಂಕ:23-10-2019 ರಿಂದ 25-10-2019ರ ವರೆಗೆ ನಡೆಸಲಾಗಿತ್ತು. ಸದರಿ ವರ್ಗಾವಣೆಯಲ್ಲಿ ಶೂನ್ಯ ಹಾಗೂ ಕಡಿಮೆ ಕಾರ್ಯಭಾರವಿರುವ 195 ವಿವಿಧ ವಿಷಯಗಳ ಉಪನ್ಯಾಸಕರು ಹಾಗೂ ಕೋರಿಕೆ ವರ್ಗಾವಣೆಯಲ್ಲಿ 503 ವಿವಿಧ ವಿಷಯಗಳ ಉಪನ್ಯಾಸಕರು ಆನ್‌ಲೈನ್ ಕೌನ್ಸಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡು ವರ್ಗಾವಣೆಗೊಂಡಿರುತ್ತಾರೆ.

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) ಅಧಿನಿಯಮ 2020ನ್ನು ಹಾಗೂ ನಿಯಮಗಳನ್ನು ಹೊಸದಾಗಿ ರಚಿಸಿ, ದಿನಾಂಕ:27-03-2020ರಲ್ಲಿ ಪ್ರಕಟಿಸಲಾಗಿದ್ದು, ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರು ಅಥವಾ ಪ್ರಾಂಶುಪಾಲರಿಗೆ ಸಂಬಂಧಿಸಿದ ಉಪಬಂಧಗಳನ್ನು ಹೊರತುಪಡಿಸಿ, ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ಅಧಿನಿಯಮ) 2007ನ್ನು ನಿರಸನಗೊಳಿಸಲಾಗಿದೆ.

ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ), 2020ರ ಅಧಿನಿಯಮವನ್ನೇ ಪದವಿ ಪೂರ್ವ ಶಿಕ್ಷಣ ಇಲಾಖೆಗೂ ಅನ್ವಯಿಸುವಂತೆ ಅಧಿನಿಯಮದ ನಿಯಮ 20ನ್ನು ತಿದ್ದುಪಡಿಗೊಳಿಸಿ, ಇದರ ಆಧಾರ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನ್ಯಾಸಕರು ಹಾಗೂ ಪ್ರಾಂಶುಪಾಲರುಗಳಿಗೆ ಪ್ರತ್ಯೇಕವಾದ ವರ್ಗಾವಣೆ ನಿಯಮವನ್ನು ರೂಪಿಸಲು ಅವಕಾಶ ಕಲ್ಪಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಕ್ರಮವಹಿಸಲಾಗುತ್ತಿದೆ.

**ಇಪಿ 16 ಪಿಎಂಎ 2021**

**(ಎಸ್. ಸುರೇಶ್ ಕುಮಾರ್)**
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ
ಹಾಗೂ ಸಕಾಲ ಸಚಿವರು.